ಚೇರ್ಮನ್.—ಪ್ರಸ್ತಾಪ ಏನೆಂದರೆ :

"೧೯೯೦ನೇ ಇಸವಿಯ ಕರ್ನಾಟಕ ಸ್ಟ್ಯಾಂಪ್ಸ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ವೀರಪ್ಪ ಮೊಯಿಲಿ.—ಮಾನ್ಯ ಅಧ್ಯಕ್ಷರೆ, ೧೯೯೦ನೇ ಇಸವಿಯ ಕರ್ನಾಟಕ ಸ್ಟ್ಯಾಂಪ್ಸ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಛೇರ್ಮನ್.—೧೯೯೦ನೇ ಇಸವಿಯ ಕರ್ನಾಟಕ ಸ್ಟ್ಯಾಂಪ್ಸ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲಾಗಿದೆ *

೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ, ನೀರಾವರಿ ಹಾಗೂ ವಿದ್ಯುಚ್ಛಕ್ತಿ ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್ಮನ್.—ಪ್ರಸ್ತಾವ ಏನೆಂದರೆ : "೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜಿ. ಪುಟ್ಟಸ್ವಾಮಿ ಗೌಡ.—ಮಾನ್ಯ ಅಧ್ಯಕ್ಷರೆ, ೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಛೇರ್ಮನ್.—೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲಾಗಿದೆ. *

೧೯೯೦ನೇ ಇಸವಿಯ ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ(ಕಾನೂನು, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವರು).—ಮಾನ್ಯ ಅಧ್ಯಕ್ಷರೆ, ಮಾನ್ಯ ಕಂದಾಯ ಮಂತ್ರಿಗಳ ಪರವಾಗಿ ೧೯೯೦ನೇ ಇಸವಿಯ ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್ಮನ್,—ಪ್ರಸ್ತಾವ ಏನೆಂದರೆ : "೧೯೯೦ನೇ ಇಸವಿಯ ಕರ್ನಾಟಕ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮಂಡನೆಗೆ ಅನುಮತಿ ನೀಡಲಾಯಿತು.

* Annexure